# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 894

ಸದಸ್ಯರ ಹೆಸರು : ಶ್ರೀ ಪಿ.ಹೆಚ್.ಪೂಜಾರ್

ಉತ್ತರಿಸುವ ಸಚಿವರು : ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು

ಉತ್ತರಿಸುವ ದಿನಾಂಕ : 24.07.2024

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ. | ರಾಜ್ಯ ಸರ್ಕಾರದ ಶಕ್ತಿ ಯೋಜನೆಯಿಂದಾಗಿ ಗ್ರಾಮೀಣ ಭಾಗದ ಅನೇಕ ಮಾರ್ಗಗಳಲ್ಲಿ ಆಸಕ್ತರು/ಹಿರಿಯರು ಹಾಗೂ ವಿದ್ಯಾಥಿಗಳು ಬಸ್ ಪ್ರಯಾಣ ಮಾಡಲು ಪರದಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಸರ್ಕಾರದ ಗಮನಕ್ಕೆ ಬಂದಿದೆ.<br><br>**ರಾಜ್ಯದ ನಾಲ್ಕು ಸಾರಿಗೆ ಸಂಸ್ಥೆಗಳಲ್ಲಿ 2023-24ರ ಪೂರ್ವದಲ್ಲಿ ಸುಮಾರು ಒಟ್ಟು 3800 ಅನುಸೂಚಿಗಳನ್ನು ಸ್ಥಗಿತಗೊಳಿಸಲಾಗಿತ್ತು. ಸದರಿ ಅನುಸೂಚಿಗಳಲ್ಲಿ ಬಹುತೇಕ ಅನುಸೂಚಿಗಳನ್ನು ಪ್ರಸ್ತುತ ಕಾರ್ಯಚರಣೆ ಮಾಡಲಾಗುತ್ತಿದ್ದು, ನಿಗಮವಾರು ವಿವರ ಕೆಳಕಂಡಂತಿದೆ.**<br><br>**ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ:**<br><br>ಮಹಿಳೆಯರಿಗೆ ಉಚಿತ ಸಾರಿಗೆ ವ್ಯವಸ್ಥೆ ಕಲ್ಪಿಸಿರುವುದರಿಂದ ಸರ್ಕಾರಿ ಬಸ್‌ಗಳಲ್ಲಿ ಸಂಚರಿಸುವವರ ಸಂಖ್ಯೆ ಗಣನೀಯವಾಗಿ ಹೆಚ್ಚಾಗಿದ್ದು, ಇದರಿಂದಾಗಿ ಅಶಕ್ತರು/ ಹಿರಿಯ ನಾಗರಿಕರು/ ಶಾಲಾ ಮಕ್ಕಳಿಗೆ ಅನಾನುಕೂಲವಾಗುತ್ತಿರುವ ಬಗ್ಗೆ ಕೆಲವು ಸ್ಥಳಗಳಲ್ಲಿ ವರದಿಯಾಗಿದ್ದು, ಅಂತಹ ಸ್ಥಳಗಳನ್ನು ಗುರುತಿಸಿ ಆ ಸ್ಥಳಗಳಿಗೆ ನಿಗಮದ ಸಿಬ್ಬಂದಿಗಳನ್ನು ಮೇಲ್ವಿಚಾರಣೆಗಾಗಿ ನಿಯೋಜಿಸಲಾಗುತ್ತಿದೆ ಹಾಗೂ ಬೇಡಿಕೆಗೆ ಅನುಗುಣವಾಗಿ ಹೆಚ್ಚುವರಿ ಸರತಿಗಳನ್ನು ಅಳವಡಿಸಲು ಕ್ರಮ ವಹಿಸಲಾಗುತ್ತಿದೆ. |
| ಆ. | ಶಕ್ತಿ ಯೋಜನೆಯಿಂದ ಮಹಿಳೆಯರಿಗೆ ಉಚಿತವಾಗಿದ್ದು ಒಂದು ಕಡೆಯಾದರೆ, ಇದರಿಂದ ಗ್ರಾಮೀಣ ಪ್ರದೇಶದ ಅಸಕ್ತರಿಗೆ ಹಾಗೂ ವಿದ್ಯಾರ್ಥಿಗಳಿಗೆ ಪ್ರಯಾಣಿಸಲು ತೊಂದರೆಗಳು, ಗದ್ದಲಗಳು ಹೆಚ್ಚಾಗಿರುವುದನ್ನು ತಡೆಯಲು ರಾಜ್ಯ ಸರ್ಕಾರ ಹೆಚ್ಚುವರಿ ಬಸ್ ಓಡಿಸಲು ಯೋಜನೆ ರೂಪಿಸಿದೆಯೇ: (ವಿವರ ನೀಡುವುದು) | ನಿಗಮದಲ್ಲಿ ಶಕ್ತಿ ಯೋಜನೆ ಜಾರಿಗೂ ಮೊದಲು 45255 ಸರತಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿತ್ತು, ಶಕ್ತಿ ಯೋಜನೆ ಜಾರಿಯಾದ ನಂತರದಲ್ಲಿ 49358 ಸರತಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ. ಪ್ರತಿದಿನ 4103 ಹೆಚ್ಚುವರಿ ಸರತಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ.<br><br>ಆದರೆ ಪ್ರಸ್ತುತ 2024-25 ಸಾಲಿನಲ್ಲಿ 304 ಹೊಸ ಅನುಸೂಚಿಗಳನ್ನು ಕಾರ್ಯಾಚರಿಸಲು ಯೋಜಿಸಲಾಗಿದ್ದು, ಅದರಲ್ಲಿ 259 ಹೊಸ ಅನುಸೂಚಿಗಳನ್ನು ಈಗಾಗಲೇ ಪ್ರಾರಂಭಿಸಲಾಗಿದೆ.<br><br>**ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ:**<br><br>ಸಂಸ್ಥೆಯಲ್ಲಿ ಶಕ್ತಿ ಯೋಜನೆ ಜಾರಿಗೆ ಮೊದಲು 56646 ಸುತ್ತುವಳಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿತ್ತು. ಶಕ್ತಿ ಯೋಜನೆ ಜಾರಿಯಾದ ನಂತರದಲ್ಲಿ 58369 ಸುತ್ತುವಳಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದ್ದು, ಪ್ರತಿದಿನ 1723 ಹೆಚ್ಚುವರಿ ಸುತ್ತುವಳಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ. |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| | | ಪ್ರಸ್ತುತ ಸಂಸ್ಥೆಯು 5649 ಅನುಸೂಚಿಗಳನ್ನು ಕಾರ್ಯಾಚರಣೆ ಮಾಡುತ್ತಿದ್ದು, 2024-25ನೇ ಸಾಲಿನಲ್ಲಿ 6305 ಅನುಸೂಚಿಗಳನ್ನು ಕಾರ್ಯಾಚರಣೆ ಮಾಡಲು ಯೋಜಿಸಲಾಗಿದೆ.<br><br>ಮುಂದುವರೆದು, ವಿದ್ಯಾರ್ಥಿ ಸಮುದಾಯ/ ಹಿರಿಯ ನಾಗರಿಕರು/ ಅಶಕ್ತರು/ ಸಾರ್ವಜನಿಕ ಪ್ರಯಾಣಿಕರ ಬೇಡಿಕೆ ಹಾಗೂ ಒತ್ತಡಕ್ಕನುಗುಣವಾಗಿ, ಮೂಲಭೂತ ಸೌಕರ್ಯಗಳ ಲಭ್ಯತೆಗನುಗುಣವಾಗಿ ಹೊಸ ಮಾರ್ಗಗಳನ್ನು ಪರಿಚಯಿಸುವುದು, ಹಾಲಿಯಿರುವ ಮಾರ್ಗಗಳಲ್ಲಿ ಸಾರಿಗೆಗಳನ್ನು ಹೆಚ್ಚಿಸುವುದು ಮತ್ತು ಪ್ರಯಾಣಿಕರ ಸಂಚಾರ ದಟ್ಟಣೆಗನುಗುಣವಾಗಿ ಸಾರಿಗೆಗಳನ್ನು ಪರಿಷ್ಕರಿಸಿ ಕಾರ್ಯಾಚರಣೆಗೊಳಿಸಲಾಗುತ್ತಿದೆ. ಅಲ್ಲದೇ ಯಾವುದೇ ಪ್ರದೇಶಗಳಿಂದ ಸಾರಿಗೆ ಸೌಲಭ್ಯವನ್ನು ಒದಗಿಸುವಂತೆ ಅಥವಾ ಹೆಚ್ಚಿಸುವಂತೆ ಮನವಿಗಳು ಬಂದಲ್ಲಿ, ಪರಿಶೀಲಿಸಿ ಕ್ರಮ ಕೈಗೊಳ್ಳುವ ಪ್ರಕ್ರಿಯೆಯು ನಿರಂತರವಾಗಿ ಜಾರಿಯಲ್ಲಿರುತ್ತದೆ.<br><br>**ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ:**<br><br>ಸಂಸ್ಥೆಯಲ್ಲಿ ಶಕ್ತಿ ಯೋಜನೆ ಜಾರಿಗೂ ಮೊದಲು 4567 ಅನುಸೂಚಿಗಳಿಂದ 34676 ಸರತಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿತ್ತು. ಶಕ್ತಿ ಯೋಜನೆ ಜಾರಿ ನಂತರದಲ್ಲಿ 4640 ಅನುಸೂಚಿಗಳಿಂದ 36395 ಸರತಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ. ಪ್ರತಿ ದಿನ 1719 ಹೆಚ್ಚುವರಿ ಸರತಿಗಳನ್ನು ಮತ್ತು 73 ಹೆಚ್ಚುವರಿ ಅನುಸೂಚಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ.<br><br>ಇದಲ್ಲದೇ ವಿದ್ಯಾರ್ಥಿ ಸಮುದಾಯ/ ಹಿರಿಯ ನಾಗರಿಕರು/ ಅಶಕ್ತರು/ ಸಾರ್ವಜನಿಕ ಪ್ರಯಾಣಿಕರ ಬೇಡಿಕೆ/ ಅವಶ್ಯಕತೆ ಅನುಗುಣವಾಗಿ ಆದ್ಯತೆ ಮೇರೆಗೆ ಸಾರಿಗೆ ಸೌಲಭ್ಯ ಕಲ್ಪಿಸುವ ಪ್ರಕ್ರಿಯೆ ನಿರಂತರ ಜಾರಿಯಲ್ಲಿದೆ.<br><br>**ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ:**<br><br>ಶಕ್ತಿ ಯೋಜನೆ ಜಾರಿಗೂ ಮೊದಲು 4028 ಅನುಸೂಚಿಗಳಿಂದ 22214 ಸರತಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿತ್ತು, ಶಕ್ತಿಯೋಜನೆ ಜಾರಿಯಾದ ನಂತರದಲ್ಲಿ 4666 ಅನುಸೂಚಿಗಳಿಂದ 27334 ಸರತಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ. ಶಕ್ತಿ ಯೋಜನೆಯ ಪೂರ್ವಕ್ಕೆ ಹೋಲಿಸಿದಲ್ಲಿ ಪ್ರತಿ ದಿನ 638 ಹೆಚ್ಚಿನ ಅನುಸೂಚಿಗಳಿಂದ 5120 ಹೆಚ್ಚುವರಿ ಸರತಿಗಳನ್ನು ಕಾರ್ಯಾಚರಣೆಯನ್ನು ಮಾಡಲಾಗುತ್ತಿದೆ.<br><br>**ಸಾರಿಗೆ ಸಂಸ್ಥೆಗಳಿಂದ 2023-24ರ ಪೂರ್ವದ 04 ವರ್ಷಗಳಲ್ಲಿ ಹೊಸ ವಾಹನಗಳನ್ನು ಖರೀದಿಸಿರುವುದಿಲ್ಲ.**<br><br>**ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದಲ್ಲಿ 2023-24ರ ಪೂರ್ವದ 07 ವರ್ಷಗಳಿಂದ ಮತ್ತು ಉಳಿದ ಸಾರಿಗೆ** |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|

**ಸಂಸ್ಥೆಗಳಲ್ಲಿ 2023-24ರ ಪೂರ್ವದ 04 ವರ್ಷಗಳಿಂದ ಸಿಬ್ಬಂದಿ ನೇಮಕಾತಿ ಆಗಿರುವುದಿಲ್ಲ.**

ಮುಂದುವರೆದು, ನಾಲ್ಕು ಸಾರಿಗೆ ಸಂಸ್ಥೆಗಳಲ್ಲಿ 2023-24 ಹಾಗೂ 2024-25ರ ಜೂನ್‌ವರೆಗೆ ಸೇರ್ಪಡೆ ಮಾಡಲಾದ ಹಾಗೂ 2024-25ನೇ ಸಾಲಿನಲ್ಲಿ ಸೇರ್ಪಡೆಗೊಳಿಸಲಾಗುತ್ತಿರುವ ಬಸ್ಸುಗಳ ವಿವರ ಈ ಕೆಳಕಂಡಂತಿದೆ:-

| **ಸಂಸ್ಥೆ** | **ಸೇರ್ಪಡೆಯಾದ ವಾಹನಗಳ ಸಂಖ್ಯೆ** | **ಸೇರ್ಪಡೆಗೊಳಿಸ ಲಾಗುತ್ತಿರುವ ವಾಹನಗಳ ಸಂಖ್ಯೆ** |
|---|---|---|
| ಕ.ರಾ.ರ.ಸಾ.ನಿಗಮ | 922 | 616 |
| ಬೆಂ.ಮ.ಸಾ.ಸಂಸ್ಥೆ | 223 | 1838 |
| ವಾ.ಕ.ರ.ಸಾ.ಸಂಸ್ಥೆ | 437 | 712 |
| ಕ.ಕ.ರ.ಸಾ.ನಿಗಮ | 1152 | 235 |
| ಒಟ್ಟು | 2734 | 3401 |

ವಿದ್ಯಾರ್ಥಿ ಸಮುದಾಯದ ಶಾಲಾ ಕಾಲೇಜು ಸಮಯಕ್ಕೆ/ ಹಿರಿಯ ನಾಗರಿಕರು/ ಅಶಕ್ತರು/ ಸಾರ್ವಜನಿಕ ಪ್ರಯಾಣಿಕರ ಅವಶ್ಯಕತೆಗೆ ಅನುಗುಣವಾಗಿ ಸುತ್ತುವಳಿಗಳು/ಬಸ್ಸುಗಳನ್ನು ಕಲ್ಪಿಸಲು ಈ ಕೆಳಕಂಡ ಅಂಶಗಳನ್ನು ಅನುಸರಿಸಲು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆಗಳನ್ನು ನೀಡಲಾಗಿದೆ.

- ಗ್ರಾಮೀಣ ಪ್ರದೇಶಗಳ ವಿಭಾಗದ ವ್ಯಾಪ್ತಿಯಲ್ಲಿ ಬರುವ ಶಾಲಾ/ಕಾಲೇಜುಗಳ ಪ್ರಾಂಶುಪಾಲರು/ ಮುಖ್ಯಸ್ಥರುಗಳನ್ನು ಸಂಪರ್ಕಿಸಿ, ಶಾಲಾ/ಕಾಲೇಜುಗಳ ಸಮಯಗಳನ್ನು ತಿಳಿದುಕೊಂಡು ಸದರಿ ಸಮಯಕ್ಕೆ ಸಾರಿಗೆಗಳನ್ನು ಕಾರ್ಯಾಚರಿಸಲು ಸೂಕ್ತ ಕ್ರಮ ಕೈಗೊಳ್ಳುವುದು.
- ಶಾಲಾ/ಕಾಲೇಜು ವಿದ್ಯಾರ್ಥಿಗಳು ಹೆಚ್ಚಿಗೆ ಸೇರುವ ಬಸ್ ನಿಲ್ದಾಣ/ಜಂಕ್ಷನ್‌ಗಳಲ್ಲಿ ಸಾರಿಗೆ ಸೇವೆಗಳ ಮೇಲ್ವಿಚಾರಣೆಗೆ ಸಂಚಾರ ನಿಯಂತ್ರಕರು/ಇತರೆ ಮೇಲ್ವಿಚಾರಕರನ್ನು ತಪ್ಪದೇ ನಿಯೋಜಿಸಿ ಸುಗಮ ಕಾರ್ಯಾಚರಣೆ ಬಗ್ಗೆ ನಿಗಾ ವಹಿಸುವುದು.
- ವಿಭಾಗದ ಎಲ್ಲಾ ಚಾಲನಾ ಸಿಬ್ಬಂದಿಗಳಿಗೆ ಶಾಲಾ ಕಾಲೇಜು ವಿದ್ಯಾರ್ಥಿಗಳು/ ಹಿರಿಯ ನಾಗರಿಕರು/ ಅಶಕ್ತರು/ ಸಾರ್ವಜನಿಕ ಪ್ರಯಾಣಿಕರ ಬಸ್ಸುಗಳಲ್ಲಿ ಪ್ರಯಾಣಿಸಲು ಅನುವಾಗಲು ನಿಗದಿತ ಬಸ್ ನಿಲ್ದಾಣಗಳಲ್ಲಿ ನಿಲುಗಡೆ ನೀಡಿ ಅವರನ್ನು ಹತ್ತಿಸಿ/ಇಳಿಸಿಕೊಂಡು ಮುಂದೆ ಹೋಗುವುದರ ಜೊತೆಗೆ ವಿದ್ಯಾರ್ಥಿಗಳು/ ಇತರೆ ಸಾರ್ವಜನಿಕರೊಂದಿಗೆ ಸೌಜನ್ಯಯುತವಾಗಿ ವರ್ತಿಸಲು ತಿಳುವಳಿಕೆ ನೀಡುವುದು.

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| | | ಸಾರ್ವಜನಿಕ ಪ್ರಯಾಣಿಕರು ಹಾಗೂ ಶಾಲಾ-ಕಾಲೇಜು ವಿದ್ಯಾರ್ಥಿಗಳ ಬೇಡಿಕೆ/ಅವಶ್ಯಕತೆಗನುಗುಣವಾಗಿ ಸಾರಿಗೆ ಸೌಲಭ್ಯವನ್ನು ಕಲ್ಪಿಸಲಾಗಿದ್ದು, ಸಾರ್ವಜನಿಕರು ಹಾಗೂ ಶಾಲಾ-ಕಾಲೇಜು ವಿದ್ಯಾರ್ಥಿಗಳು ಸದರಿ ಸಾರಿಗೆಗಳ ಸದುಪಯೋಗವನ್ನು ಪಡೆದುಕೊಳ್ಳುತ್ತಿದ್ದಾರೆ. ಇನ್ನೂ ಹೆಚ್ಚಿನ ಬೇಡಿಕೆಗಳು ಬಂದಲ್ಲಿ ಮೂಲಭೂತ ಸಂಪನ್ಮೂಲಗಳನ್ನು ಕ್ರೋಢೀಕರಿಸಿಕೊಂಡು ಪರಿಶೀಲಿಸಿ, ಹಂತಹಂತವಾಗಿ ಸಾರಿಗೆ ಸೌಲಭ್ಯವನ್ನು ಒದಗಿಸಲಾಗುವುದು.<br><br>**ಸಾರಿಗೆ ಸಂಸ್ಥೆಗಳಲ್ಲಿ 2023-24ರ ಪೂರ್ವದಲ್ಲಿ ಕಾರ್ಯಾಚರಿಸಲಾಗುತ್ತಿದ್ದ ಅನುಸೂಚಿಗಳಿಗಿಂತ ಮೇಲ್ಕಂಡಂತೆ ಹೆಚ್ಚುವರಿ ಅನುಸೂಚಿಗಳನ್ನು ಪ್ರಸ್ತುತ ಕಾರ್ಯಾಚರಣೆ ಮಾಡಲಾಗುತ್ತಿರುವುದರಿಂದ, ಶಕ್ತಿ ಯೋಜನೆ ಜಾರಿಯಿಂದ ಸಾರ್ವಜನಿಕ ಪ್ರಯಾಣಿಕರು, ಅಶಕ್ತರು ಹಾಗೂ ಶಾಲಾ-ಕಾಲೇಜು ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿರುವುದಿಲ್ಲ.** |

ಸಂಖ್ಯೆ: ಟಿಡಿ 141 ಟಿಸಿಕ್ಯೂ 2024

**(ರಾಮಲಿಂಗಾರೆಡ್ಡಿ)**
ಸಾರಿಗೆ ಮತ್ತು ಮುಜರಾಯಿ ಸಚಿವರು